# Phone call between Prime Minister Shri Narendra Modi and H.E. Mr. Suga Yoshihide, Prime Minister of Japan

April 26, 2021

# ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಮತ್ತು ಘನತೆವೆತ್ತ ಜಪಾನ್ ಪ್ರಧಾನಿ ಶ್ರೀ ಸುಗಾ ಯೋಶಿಹಿಡೆ ಅವರ ನಡುವೆ ದೂರವಾಣಿ ಸಂಭಾಷಣೆ

ಏಪ್ರಿಲ್ 26, **2021**

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ಇಂದು ಜಪಾನ್ ಪ್ರಧಾನಿ ಶ್ರೀ ಸುಗಾ ಯೋಶಿಹಿಡೆ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು.

ಉಭಯ ನಾಯಕರೂ ಆಯಾ ದೇಶದ ಕೋವಿಡ್-19 ಪರಿಸ್ಥಿತಿಯ ಬಗ್ಗೆ ಚರ್ಚಿಸಿದರು ಮತ್ತು ಸಾಂಕ್ರಾಮಿಕ ರೋಗವು ಒಡ್ಡಿರುವ ವಿವಿಧ ಪ್ರಾದೇಶಿಕ ಮತ್ತು ಜಾಗತಿಕ ಸವಾಲುಗಳ ಬಗ್ಗೆ ಅಭಿಪ್ರಾಯ ವಿನಿಮಯ ಮಾಡಿಕೊಂಡರು. ಈ ಸವಾಲುಗಳನ್ನು ಎದುರಿಸಲು ಭಾರತ-ಜಪಾನ್ ನಡುವಿನ ನಿಕಟ ಸಹಕಾರದ ಮಹತ್ವವನ್ನು ಅವರು ಎತ್ತಿ ಹೇಳಿದರು. ವೈವಿಧ್ಯಮಯ, ಸ್ಥಿತಿಸ್ಥಾಪಕ ಮತ್ತು ವಿಶ್ವಾಸಾರ್ಹ ಪೂರೈಕೆ ಸರಪಳಿಗಳನ್ನು ರಚಿಸಲು ಒಟ್ಟಾಗಿ ಕೆಲಸ ಮಾಡುವುದು; ನಿರ್ಣಾಯಕ ಸರಕುಗಳು ಮತ್ತು ತಂತ್ರಜ್ಞಾನಗಳ ವಿಶ್ವಾಸಾರ್ಹ ಪೂರೈಕೆಯನ್ನು ಖಾತರಿಪಡಿಸುವುದು; ಉತ್ಪಾದನೆ ಮತ್ತು ಕೌಶಲ್ಯ ಅಭಿವೃದ್ಧಿಯಲ್ಲಿ ಹೊಸ ಪಾಲುದಾರಿಕೆಯನ್ನು ಅಭಿವೃದ್ಧಿಪಡಿಸುವುದು ಮುಂತಾದವು ಈ ಸವಾಲುಗಳಲ್ಲಿ ಸೇರಿವೆ. ಉಭಯ ದೇಶಗಳೂ ತಮ್ಮ ಸಾಮರ್ಥ್ಯಗಳನ್ನು ಸಮನ್ವಯಗೊಳಿಸಲು ಮತ್ತು ಪರಸ್ಪರ ಪ್ರಯೋಜನಕಾರಿ ಫಲಿತಾಂಶಗಳನ್ನು ಸಾಧಿಸಲು 'ನಿರ್ದಿಷ್ಟ ನುರಿತ ಕಾರ್ಮಿಕರ (ಎಸ್ಎಸ್‌ಡಬ್ಲ್ಯು) ಒಪ್ಪಂದ'ದ ತ್ವರಿತ ಕಾರ್ಯಾನುಷ್ಠಾನದ ಅಗತ್ಯವನ್ನು ಇಬ್ಬರೂ ನಾಯಕರು ಒತ್ತಿ ಹೇಳಿದರು. ಮುಂಬೈ-ಅಹಮದಾಬಾದ್ ಹೈಸ್ಪೀಡ್ ರೈಲು (ಎಂಎಎಚ್ಎಸ್ಆರ್) ಯೋಜನೆಯನ್ನು ತಮ್ಮ ಸಹಕಾರದ ಜ್ವಲಂತ ಉದಾಹರಣೆ ಎಂದು ಒತ್ತಿ ಹೇಳಿದ ಅವರು, ಅದರ ಅನುಷ್ಠಾನದಲ್ಲಿ ಸ್ಥಿರವಾದ ಪ್ರಗತಿಯನ್ನು ಸ್ವಾಗತಿಸಿದರು.

ಕೋವಿಡ್-19 ಸಾಂಕ್ರಾಮಿಕ ರೋಗದ ಸಂದರ್ಭದಲ್ಲಿ ಎರಡೂ ದೇಶದಲ್ಲಿ ವಾಸಿಸುವ ನಾಗರಿಕರಿಗೆ ಪರಸ್ಪರ ಒದಗಿಸಲಾದ ಬೆಂಬಲ ಮತ್ತು ಸೌಲಭ್ಯವನ್ನು ಉಭಯ ನಾಯಕರು ಶ್ಲಾಘಿಸಿದರು. ಈ ಸಮನ್ವಯವನ್ನು ಮುಂದುವರಿಸಲು ಒಪ್ಪಿಕೊಂಡರು.

ಸಾಂಕ್ರಾಮಿಕ ರೋಗವನ್ನು ಎದುರಿಸಲು ಭಾರತಕ್ಕೆ ನೆರವು ನೀಡಿದ್ದಕ್ಕಾಗಿ ಪ್ರಧಾನಿ ಸುಗಾ ಅವರಿಗೆ ಮೋದಿ ಅವರು ಧನ್ಯವಾದ ಅರ್ಪಿಸಿದರು. ಕೋವಿಡ್-19 ಪರಿಸ್ಥಿತಿ ಸುಧಾರಿಸಿದ ನಂತರ ಮುಂದಿನ ದಿನಗಳಲ್ಲಿ ಪ್ರಧಾನಿ ಸುಗಾ ಅವರನ್ನು ಆದಷ್ಟು ಬೇಗ ಭಾರತದಲ್ಲಿ ಸ್ವಾಗತಿಸುವ ಆಶಯವನ್ನು ಪ್ರಧಾನಿ ಮೋದಿ ವ್ಯಕ್ತಪಡಿಸಿದರು.

ನವ ದೆಹಲಿ

ಏಪ್ರಿಲ್ 26, **2021**

DISCLAIMER: This is an approximate translation. The original is available in English on MEA's website and may be referred to as the official press release.